6392
1257

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಶೇ. 50ರ ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನ / ಶೆಡ್‌ಗಳನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ:**
1) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಕೈಅ/ಇ1/1455/2016-17, ದಿನಾಂಕ: 15.04.2016.
2) ಸರ್ಕಾರದ ಆದೇಶ ಸಂ: ಸಿಐ 147 ಸಿಎಸ್‌ಸಿ 2015, ದಿ: 22.07.2015.
3) ಕೈಗಾರಿಕಾ ನೀತಿ 2014-19 ಜಾರಿಗೆ ತಂದಿರುವ ಸರ್ಕಾರಿ ಆದೇಶ ಸಂಖ್ಯೆ: ಸಿಐ 58 ಎಸ್‌ಪಿಐ 2014, ದಿನಾಂಕ: 01.10.2014.

* * * * *

**ಪ್ರಸ್ತಾವನೆ:**

2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 378(1)ರಲ್ಲಿ ಈ ಕೆಳಕಂಡಂತೆ ಘೋಷಣೆಯಾಗಿರುತ್ತದೆ.

*"ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಉದ್ಯಮಿಗಳಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಲು ಮತ್ತು ಕೈಗಾರಿಕಾ ಸಾಮರ್ಥ್ಯವನ್ನು ತುಂಬಲು ಈ ಕೆಳಕಂಡ ಕ್ರಮಗಳನ್ನು ಪ್ರಸ್ತಾಪಿಸಿದೆ:*

- *ಶೇ. 50 ದರದಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಉದ್ಯಮಿಗಳಿಗೆ ಕೆ.ಐ.ಎ.ಡಿ.ಬಿ./ಕೆ.ಎಸ್.ಎಸ್.ಐ.ಡಿ.ಸಿ. ಯಿಂದ ಶೆಡ್ ಮತ್ತು ಭೂಮಿಯನ್ನು ಹಂಚಿಕೆ ಮಾಡಲಾಗುವುದು. ಭೂಮಿ ಮತ್ತು ಶೆಡ್‌ಗಳ ಮೌಲ್ಯದ ಪಾವತಿಯನ್ನು ಕಂತುಗಳಲ್ಲಿ ಪರಿಗಣಿಸಲಾಗುವುದು. ಇದರಲ್ಲಿ ಶೇ.50 ರಷ್ಟನ್ನು ಮೊದಲಿಗೆ ಪಾವತಿಸಬೇಕಾಗಿದ್ದು, ಬಾಕಿ ಶೇ.50 ರಷ್ಟನ್ನು 8 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಬೇಕಾಗಿರುತ್ತದೆ."*

ಅದರಂತೆ ಮೇಲೆ ಕ್ರಮಾಂಕ ಓದಲಾದ (1) ರ ಪತ್ರದಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಮತ್ತು ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಹಂಚಿಕೆಯಾಗುವ ಕೈಗಾರಿಕಾ ನಿವೇಶನ / ಶೆಡ್‌ನ್ನು ಶೇ.50ರ ರಿಯಾಯಿತಿ ದರದಲ್ಲಿ ಹಂಚಿಕೆ ಮಾಡಲು ಈ ಕೆಳಕಂಡಂತೆ ಓದಲಾದ (2) ರ ಸರ್ಕಾರಿ ಆದೇಶಕ್ಕೆ ತಿದ್ದುಪಡಿಗಳನ್ನು ತಂದು ಪರಿಷ್ಕೃತ ಆದೇಶವನ್ನು ಹೊರಡಿಸಲು ಕೋರಿರುತ್ತಾರೆ.

ವತಿಯಿಂದ ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶದಲ್ಲಿ ಹಂಚಿಕೆಗೆ ಅರ್ಹವಿರುವ ನಿವೇಶನಗಳ ಒಟ್ಟು ವಿಸ್ತೀರ್ಣದಲ್ಲಿ ಕನಿಷ್ಠ ಶೇ. 20ರಷ್ಟು ಭಾಗವನ್ನು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವರ್ಗದ (ಎಂಎಸ್ಎಂಇ) ಉದ್ದಿಮೆಗಳಿಗೆ ಮೀಸಲಿಡತಕ್ಕದ್ದು.

ಮುಂದುವರೆದು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ (ಕೆಎಸ್ಎಸ್ಐಡಿಸಿ) ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶ/ ವಸಾಹತುಗಳಲ್ಲಿನ ನಿವೇಶನ / ಶೆಡ್‌ಗಳ ಹಂಚಿಕೆಯಲ್ಲಿ ಈ ಕೆಳಕಂಡಂತೆ ಶೇಕಡವಾರು ಮೀಸಲಾತಿಯನ್ನು ಅನುಸರಿಸಿ ಹಂಚಿಕೆ ಮಾಡತಕ್ಕದೆಂದು ಆದೇಶಿಸಲಾಗಿದೆ.

- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಮಹಿಳಾ ಉದ್ದಿಮೆದಾರರಿಗೆ ಕನಿಷ್ಠ ಶೇ. 5ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಉದ್ದಿಮೆದಾರರಿಗೆ ಕನಿಷ್ಠ ಶೇ. 22.50ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ವರ್ಗ-1 ಮತ್ತು 2ಎ), ವಿಕಲಚೇತನ ಹಾಗೂ ಮಾಜಿ ಸೈನಿಕ ಉದ್ದಿಮೆದಾರರಿಗೆ ಕನಿಷ್ಠ ಶೇ. 10ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು ಹಾಗೂ ಈ ವರ್ಗದ ಉದ್ದಿಮೆದಾರರು ನಿವೇಶನ/ *ಶೆಡ್‌ಗಳ ಮೊತ್ತವನ್ನು 6 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸತಕ್ಕದ್ದು.*

ಈ ಹಿಂದೆ ವಿವಿಧ ವರ್ಗಗಳ ಸಮುದಾಯದ ಉದ್ದಿಮೆದಾರರಿಗೆ ಮೀಸಲಾತಿ ನಿರ್ಧರಿಸುವ ಕುರಿತು ಹೊರಡಿಸಲಾದ ಸರ್ಕಾರಿ ಆದೇಶ ಸಂ: ಸಿಐ 148 ಸಿಎಸ್‌ಸಿ 2015, ದಿ: 27.06.2015 ಅನ್ನು ಹಿಂಪಡೆಯಲಾಗಿದೆ. ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಈ ಮೀಸಲಾತಿ ಆದೇಶವನ್ನು ತತ್‌ಕ್ಷಣದಿಂದ ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

05.05.2016

*(ಎಲ್.ಎಸ್. ಶ್ರೀಕಂಠಬಾಬು)*
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಲಾಗಿದೆ.

**ಪ್ರತಿಯನ್ನು:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 81 ಸಿಎಸ್‌ಸಿ 2016, ಬೆಂಗಳೂರು, ದಿನಾಂಕ: 27.06.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿರುವಂತೆ ಪರಿಶಿಷ್ಟ ಜಾತಿ / ಪಂಗಡದ ಉದ್ಯಮಿಗಳಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ.) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ.) ಸಂಸ್ಥೆಗಳಿಂದ ಕೈಗಾರಿಕಾ ನಿವೇಶನ / ಮಳಿಗೆಗಳನ್ನು ಶೇ. 50ರ ರಿಯಾಯಿತಿ ದರದಲ್ಲಿ ಈ ಕೆಳಕಂಡ ನಿಬಂಧನೆಗಳಿಗೊಳಪಡಿಸಿ ಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ.

- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆಯಾಗುವ ಕೈಗಾರಿಕಾ ನಿವೇಶನ / ಮಳಿಗೆಯ ಶೇ. 50ರ ರಿಯಾಯಿತಿ ಮೌಲ್ಯವನ್ನು ಸರ್ಕಾರದಿಂದ ಸಂಬಂಧಿಸಿದ ಸಂಸ್ಥೆಗಳಿಗೆ (ಕೆ.ಎಸ್.ಎಸ್.ಐ.ಡಿ.ಸಿ. / ಕೆ.ಐ.ಎ.ಡಿ.ಬಿ.) ಪಾವತಿ ಮಾಡುವುದು.

- ಈ ಶೇ.50ರ ರಿಯಾಯಿತಿ ಮೌಲ್ಯವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆ (SCSP/TSP) ಅಡಿಯಲ್ಲಿ ಹಂಚಿಕೆಯಾಗುವ ಆಯವ್ಯಯದಿಂದ ಭರಿಸತಕ್ಕದು ಮತ್ತು SCSP/TSP ಯೋಜನೆಯಡಿಯಲ್ಲಿ ಈ ಕಾರ್ಯಕ್ರಮಕ್ಕೆ ರೂಪಿಸಲಾಗಿರುವ ಮಾರ್ಗಸೂಚಿಗಳನ್ನು ಪಾಲಿಸತಕ್ಕದ್ದು.

- ಹಂಚಿಕೆ ಪಡೆದ ಉದ್ದಿಮೆದಾರರಿಂದ ನಿವೇಶನ / ಮಳಿಗೆಯ ಶೇ. 25ರಷ್ಟು ಮೌಲ್ಯವನ್ನು ಮೊದಲು (Upfront) ಸಂಬಂಧಿಸಿದ ಸಂಸ್ಥೆಗಳು ಪಡೆದುಕೊಳ್ಳತಕ್ಕದ್ದು. ನಂತರ, ಉಳಿದ ಶೇ. 25ರಷ್ಟು ನಿವೇಶನ / ಮಳಿಗೆಯ ಮೌಲ್ಯದ ಮೊತ್ತವನ್ನು 8 ಸಮ ತ್ರೈಮಾಸಿಕ ಕಂತುಗಳಲ್ಲಿ ಸೂಕ್ತ ಬಡ್ಡಿ ದರದೊಂದಿಗೆ ವಸೂಲಾತಿ ಮಾಡಿಕೊಳ್ಳತಕ್ಕದ್ದು.

ಈ ಆದೇಶವನ್ನು ದಿನಾಂಕ: 01.04.2016 ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 06 ಎಫ್‌ಆರ್‌ಟಿ 2016, ದಿನಾಂಕ: 23.06.2016 ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 190 ವೆಚ್ಚ-01 2016, ದಿನಾಂಕ: 13.05.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.